ಆ) ಶುದ್ಧ ನೀರು ಒದಗಿಸಲು ಕೇಂದ್ರ, ರಾಜ್ಯ ಸರ್ಕಾರದಿಂದ ಇದುವರೆವಿಗೂ ಯಾವ ಯಾವ ಯೋಜನೆಯನ್ನು ಕುಡಿಯುವ ನೀರಿನ ವ್ಯವಸ್ಥೆಗೆ ಹಮ್ಮಿಕೊಂಡು ಎಷ್ಟು ಹಣವನ್ನು ಖರ್ಚು ಮಾಡಿ ಮೀಸಲಿರಿಸಲಾಗಿದೆ; ಇದರಲ್ಲಿ ಖರ್ಚಾಗಿರುವ ಹಣ ಎಷ್ಟು;

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ. ಅಧಿಕ ಫ್ಲೋರೈಡ್ ಬಾಧೆಗೊಳಗಾಗಿರುವ ತಾಲ್ಲೂಕುಗಳ ಗ್ರಾಮೀಣ ಜನವಸತಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ವ್ಯವಸ್ಥೆಗಾಗಿ ಭೂಮಿಯ ಮೇಲ್ಮೈ ಜಲಮೂಲ ಆಧಾರಿತ ಕುಡಿಯುವ ನೀರಿನ ಯೋಜನೆಗಳು, ಡೀ–ಫ್ಲೋರಿಡೇಷನ್ ಘಟಕಗಳ ಮೂಲಕ ಲಭ್ಯವಿರುವ ನೀರನ್ನು ಶುದ್ಧೀಕರಿಸಿ ಪೂರೈಸುವುದು ಹಾಗೂ ಮಳೆ ನೀರು ಕೊಯ್ಲು ವಿಧಾನಗಳನ್ನು ಅಳವಡಿಸುವ ಪರಿಕ್ರಮಗಳನ್ನು ಕೈಗೊಳ್ಳಲಾಗಿದೆ.

ಆ) ಶುದ್ಧ ಕುಡಿಯುವ ನೀರು ಪೂರೈಕೆ ವ್ಯವಸ್ಥೆಗಾಗಿ ಪ್ರಸಕ್ತ ಸಾಲಿನಲ್ಲಿ ರೂ. 24.00 ಕೋಟಿ ಕೇಂದ್ರ ಮತ್ತು ರಾಜ್ಯ ವಲಯಗಳಡಿ ಬಿಡುಗಡೆ ಮಾಡಲಾಗಿದೆ. ಈ ಪೈಕಿ, ರೂ.6.38 ಕೋಟಿ ಹಣ ವೆಚ್ಚ ಮಾಡಲಾಗಿದೆ.

ದೇವಸ್ಥಾನದ ಮಾಸ್ಟರ್ ಪ್ಲಾನ್ ಯೋಜನೆಯ ಬಗ್ಗೆ

120 (232): ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನ ಐತಿಹಾಸಿಕ ಮತ್ತು ತೀರ್ಥಕ್ಷೇತ್ರವಾದ ವಿದುರಾಶ್ವತ್ಥದ ಅಭಿವೃದ್ಧಿ ಸಲುವಾಗಿ ಮಾಸ್ಟರ್ ಪ್ಲಾನ್ ಯೋಜನೆಯ ಪ್ರಸ್ತಾಪನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಮಾಸ್ಟರ್ ಪ್ಲಾನ್ ಯೋಜನೆಯನ್ನು ಎಂದು ಜಾರಿಗೆ ತರಲಾಗುವುದು?

ಡಾ॥ ವಿ.ಎಸ್.ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು):

ಅ) ವಿದುರಾಶ್ವತ್ಥದ ಮಾಸ್ಟರ್ ಪ್ಲಾನ್ ಸಿದ್ಧತೆಯು ಅಂತಿಮ ಹಂತದಲ್ಲಿದೆ.

ಆ) 2011–12ನೇ ಸಾಲಿನಿಂದ ಮಾಸ್ಟರ್ ಪ್ಲಾನ್ ಯೋಜನೆಯನ್ನು ಹಂತಹಂತವಾಗಿ ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುವುದು.

ಕಾಲೇಜು ಕಟ್ಟಡ ನಿರ್ಮಾಣ

121 (233): ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿ ಬಿದನೂರು ತಾಲ್ಲೂಕಿನಲ್ಲಿ ಪ್ರಥಮ ದರ್ಜೆ ಕಾಲೇಜು ಮಂಜೂರಾಗಿ ಕಟ್ಟಡ ಮತ್ತು ನಾಲ್ಕು ಕೊಠಡಿಗಳು ಮಾತ್ರ ನಿರ್ಮಾಣವಾಗುತ್ತಿದ್ದು, ಎಲ್ಲಾ ಪದವಿ ಕೋರ್ಸುಗಳನ್ನು ನಡೆಸಲು ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪದವಿಯ ಎಲ್ಲಾ ಕೋರ್ಸುಗಳನ್ನು ನಡೆಸಲು ಹೆಚ್ಚಿನ ಕೊಠಡಿಗಳನ್ನು ನಿರ್ಮಿಸುವ ಸಲುವಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೇ?

ಡಾ॥ ವಿ.ಎಸ್.ಆಚಾರ್ಯ (ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಅನುದಾನದ ಲಭ್ಯತೆಯನ್ನು ಆಧರಿಸಿ ಅನುದಾನ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು.

ಪಿಡಿಒ ಅಧಿಕಾರಿಗಳ ಕಾರ್ಯ ಹಂಚಿಕೆ ಬಗ್ಗೆ

122 (234) ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಸರ್ಕಾರವು ನೇಮಕ ಮಾಡಿದ್ದು, ಈ ಅಧಿಕಾರಿಗಳು ಮತ್ತು ಪಂಚಾಯತಿ ಕಾರ್ಯದರ್ಶಿಯವರು ಯಾವ ಯಾವ ಕೆಲಸಗಳನ್ನು